# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಮಾರ್ಚ್ 2019ಕ್ಕೆ ಕೊನೆಗೊಂಡ ವರ್ಷಕ್ಕೆ ಸಾಮಾನ್ಯ ಮತ್ತು ಸಾಮಾಜಿಕ ವಲಯದ (ವರದಿ ಸಂಖ್ಯೆ:–3)ನ್ನು ಸಭೆಯ ಮುಂದಿಡುವುದು.

## 02. ವರದಿಗಳನ್ನೊಪ್ಪಿಸುವುದು

01. **ಶ್ರೀ ಕೆ.ಎ. ತಿಪ್ಪೇಸ್ವಾಮಿ (ಸದಸ್ಯರು, ಅಧೀನ ಶಾಸನ ರಚನಾ ಸಮಿತಿ)** ಅವರು 2018–19 ಹಾಗೂ 2019–20ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯ 49ನೇ ವರದಿಯನ್ನೊಪ್ಪಿಸುವುದು.
02. **ಡಾ: ತೇಜಸ್ವಿನಿಗೌಡ (ಸದಸ್ಯರು, ಜಂಟಿ ಪರಿಶೀಲನಾ ಸಮಿತಿ)** ಅವರು 2020ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಿಧೇಯಕವನ್ನು ಪರಿಶೀಲಿಸಲು ರಚಿಸಲಾಗಿರುವ ಜಂಟಿ ಪರಿಶೀಲನಾ ಸಮಿತಿಯ ವಿಶೇಷ ವರದಿಯನ್ನೊಪ್ಪಿಸುವುದು.

## 03. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ** ಅವರು;–

ಅ) ಬಳ್ಳಾರಿ ಜಿಲ್ಲೆ ಸಂಡೂರು ಹೋಬಳಿಯ ಎಮ್ಮಿಹಟ್ಟಿ ಗ್ರಾಮದ ಸರ್ವೇ ನಂಬರ್ 13/2 ರಿಂದ 43/ಸಿ ವರೆಗಿನ ಜಮೀನುಗಳನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

ಆ) ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ, ರಟ್ಟಾಡಿ, ಹೊರೊಳ್ಳಿಜೆಡ್ಡು, ಮಾವಿನಕೊಡ್ಲ, ಹಣೆಜೆಡ್ಡು, ಕೆಮ್ಮುಗುಡ್ಡೆ ಎಸ್.ಸಿ. ಕಾಲೋನಿಯ ರಸ್ತೆ ಮತ್ತು ಸೇತುವೆಗಳನ್ನು ಕಾಂಕ್ರೀಟ್‌ಕರಣ ಮಾಡಲು ಅರಣ್ಯ ಅಧಿಕಾರಿಗಳ ತಡೆ ಆಜ್ಞೆಯನ್ನು ತೆರವುಗೊಳಿಸಿ ಅನುಮತಿ ನೀಡುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

...2/..

## 04. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2020**

**ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ " ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ "ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| **ಶ್ರೀಯುತರುಗಳಾದ:**<br>**ಎಸ್.ಆರ್.ಪಾಟೀಲ್, ಮಾನ್ಯ ವಿ.ಪ.ನಾ ಎಂ.ನಾರಾಯಣಸ್ವಾಮಿ, ಮಾನ್ಯ ವಿ.ಪ.ಮು.ಸ ಅಲ್ಲಂ ವೀರಭದ್ರಪ್ಪ, ಆರ್.ಬಿ.ತಿಮ್ಮಾಪುರ ಹಾಗೂ ಇತರರುಗಳು** | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಅತಿವೃಷ್ಠಿಯಿಂದಾಗಿ ಸಾರ್ವಜನಿಕ ಆಸ್ತಿಪಾಸ್ತಿಗಳು ಹಾಗೂ ಪ್ರಾಣ ಹಾನಿಯಾಗಿದ್ದು ಸರ್ಕಾರವು ಪರಿಹಾರ ಕಾರ್ಯಗಳನ್ನು ಕೈಗೊಳ್ಳದಿರುವ ಬಗ್ಗೆ. |

## 06. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

## 07. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮರಿತಿಬ್ಬೇಗೌಡ** ಅವರು ಕೋವಿಡ್-19 ಹಿನ್ನೆಲೆಯಲ್ಲಿ ಆರ್ಥಿಕ ಮುಗ್ಗಟ್ಟಿನಿಂದಾಗಿ ಅನುದಾನ ರಹಿತ ಶಾಲಾ ಕಾಲೇಜುಗಳು, ಪಾಲಿಟೆಕ್ನಿಕ್ ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವೇತನ ಪಾವತಿಸದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

...3/..

೦2. **ಶ್ರೀಮತಿ ಎಸ್. ವೀಣಾ ಅಚ್ಚಯ್ಯ** ಅವರು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿನ ನಿರ್ದೇಶಕರನ್ನು ಪ್ರತಿನಿಯೋಜನೆ ನಿಯಮಾವಳಿಗೆ ವಿರುದ್ಧವಾಗಿ ಕಳೆದ 9 ವರ್ಷಗಳಿಂದ ಮುಂದುವರೆಸಿಕೊಂಡು ಬಂದಿರುವುದರಿಂದ ಸಂಸ್ಥೆಯ ಗುಣಮಟ್ಟ ಕುಂಠಿತವಾಗಿರುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 08. ನಿಯಮ 330ರ ಮೇರೆಗೆ

೦1. **ಶ್ರೀ ಕೆ.ಟಿ. ಶ್ರೀಕಂಠೇಗೌಡ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ನಿವೃತ್ತಿ/ ರಾಜೀನಾಮೆ/ಇನ್ನಿತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳ ಭರ್ತಿ ಹಾಗೂ 1986ರಿಂದ 1995ನೇ ಸಾಲಿನವರೆಗೆ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯು ಕೋವಿಡ್-19ರ ಹಿನ್ನೆಲೆಯಲ್ಲಿ ಅನುಮೋದನೆ ನೀಡಲು ಸಾಧ್ಯವಿಲ್ಲವೆಂದು ಆದೇಶಿಸಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಮಾನ್ಯ ಸರ್ಕಾರಿ ಮುಖ್ಯ ಸಚೇತಕರು)** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದಲ್ಲಿ ವಾಸಿಸುತ್ತಿರುವ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**